ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಅಧಿನಿಯಮ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ  ದಿನಾಂಕ : DATE : 16/2/21

# ಗೋಹತ್ಯೆ ಕಾಯ್ದೆ ರಾಜ್ಯಪತ್ರ ಪ್ರಕಟ

16/2/21

ಬೆಂಗಳೂರು: ರಾಜ್ಯದಲ್ಲಿ 13 ವರ್ಷದೊಳಗಿನ ಹಸು, ಎತ್ತು, ಕರು, ಎಮ್ಮೆ, ಕೋಣ ವಧೆ ನಿಷೇಧ ಸೇರಿದಂತೆ ಕೆಲ ನಿರ್ಬಂಧಗಳಿರುವ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಕಾಯ್ದೆ ಸಂಬಂಧ ಸೋಮವಾರ ರಾಜ್ಯಪತ್ರ ಪ್ರಕಟವಾಗಿದೆ. ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ತಿದ್ದುಪಡಿ ವಿಧೇಯಕ ಡಿಸೆಂಬರ್‌ನಲ್ಲಿ ನಡೆದ ವಿಧಾನಮಂಡಲ ಅಧಿವೇಶನ ಸಂದರ್ಭದಲ್ಲಿ ವಿಧಾನಸಭೆಯಲ್ಲಿ ಅನುಮೋದನೆಯಾಗಿತ್ತು. ಆ ಬಳಿಕ ಸರ್ಕಾರ ಸುಗ್ರೀವಾಜ್ಞೆ ಹೊರಡಿಸಿತ್ತು. ಇತ್ತೀಚೆಗೆ ನಡೆದ ವಿಧಾನಮಂಡಲದ ಉಭಯ ಸದನಗಳನ್ನು ಉದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಿದ ಅಧಿವೇಶನದಲ್ಲಿ ವಿಧಾನ ಪರಿಷತ್‌ನಲ್ಲೂ ವಿಧೇಯಕಕ್ಕೆ ಅಂಗೀಕಾರ ದೊರೆತ ಹಿನ್ನೆಲೆಯಲ್ಲಿ ಕಾಯ್ದೆ ಸಂಬಂಧ ರಾಜ್ಯಪತ್ರ ಪ್ರಕಟಿಸಲಾಗಿದೆ.